**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1393 |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್.ಭೋಜೇಗೌಡ |
| ಉತ್ತರಿಸುವ ದಿನಾಂಕ | : | 24/12/2021 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಮತ್ತು ಯಾವುವು; ಅವುಗಳ ಸಾಮರ್ಥ್ಯವೆಷ್ಟು; ಸ್ವಂತ ಕಟ್ಟಡ ಹೊಂದಿರುವ ಹಾಸ್ಟೆಲ್‌ಗಳೆಷ್ಟು; ಮತ್ತು ಬಾಡಿಗೆ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳೆಷ್ಟು; (ತಾಲ್ಲೂಕುವಾರು ಮತ್ತು ಹಾಸ್ಟೆಲ್‌ವಾರು ಮಾಹಿತಿ ನೀಡುವುದು) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿಯ 38 ಮೆಟ್ರಿಕ್ ಪೂರ್ವ ಹಾಗೂ 20 ಮೆಟ್ರಿಕ್ ನಂತರದ, ಒಟ್ಟಾರೆಯಾಗಿ 58 ಸರ್ಕಾರಿ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದೆ. ಸದರಿ ವಿದ್ಯಾರ್ಥಿ ನಿಲಯಗಳ ಮಂಜೂರಾತಿ ಸಂಖ್ಯೆ, ಕಳೆದ ಎರಡು ವರ್ಷಗಳಲ್ಲಿ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಹಾಗೂ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಕಟ್ಟಡದ ವಿವರಗಳನ್ನು ಅನುಬಂಧ-1ರಲ್ಲಿ ನೀಡಿದೆ. |
| ಆ) | ಚಿಕ್ಕಮಗಳೂರು ಜಿಲ್ಲೆಯ ಪ್ರತಿ ಹಾಸ್ಟೆಲ್‌ಗೆ ಕಳೆದೆರಡು ವರ್ಷಗಳಿಂದ ದಾಖಲಾತಿ ಕೋರಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು; ಇದರಲ್ಲಿ, ಎಷ್ಟು ವಿದ್ಯಾರ್ಥಿಗಳಿಗೆ ದಾಖಲಾತಿ ನೀಡಲಾಗಿದೆ; (ತಾಲ್ಲೂಕುವಾರು ಮತ್ತು ಹಾಸ್ಟೆಲ್‌ವಾರು ಮಾಹಿತಿ ನೀಡುವುದು) ಹಾಸ್ಟೆಲ್ ಸೀಟು ಪಡೆಯಲು ಸಾಧ್ಯವಾಗದ ವಿದ್ಯಾರ್ಥಿಗಳಿಗೆ ಸರ್ಕಾರವು ಕಲ್ಪಿಸಿರುವ ಸೌಲಭ್ಯಗಳೇನು; (ವಿವರ ನೀಡುವುದು) | ಮುಂದುವರೆದು, ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದ್ದು, ವಿದ್ಯಾರ್ಥಿ ನಿಲಯಕ್ಕೆ ಪ್ರವೇಶ ದೊರಕದ ವಿದ್ಯಾರ್ಥಿಗಳಿಗೆ ಸೌಲಭ್ಯ ಕಲ್ಪಿಸುವ ಅಂಶ ಉದ್ಭವವಾಗುವುದಿಲ್ಲ. |
| ಇ) | ಈ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಕಲ್ಪಿಸಿರುವ ಸೌಲಭ್ಯಗಳೇನು; ಖಾಸಗಿ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳ ಬದಲಿಗೆ ಸ್ವಂತ ಕಟ್ಟಡ ಹೊಂದಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಇಲಾಖೆಯ ವತಿಯಿಂದ ನಡೆಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಒದಗಿಸುತ್ತಿರುವ ಮೂಲಭೂತ ಸೌಕರ್ಯಗಳ ವಿವರಗಳನ್ನು ಅನುಬಂಧ-2ರಲ್ಲಿ ನೀಡಿದೆ.<br>ಮುಂದುವರೆದು, ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಲಾಖೆಯ ವತಿಯಿಂದ ನಡೆಸುತ್ತಿರುವ 58 ಪರಿಶಿಷ್ಟ ಜಾತಿಯ ವಿದ್ಯಾರ್ಥಿ ನಿಲಯಗಳ ಪೈಕಿ 54 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡದಲ್ಲಿ ಹಾಗೂ 04 ವಿದ್ಯಾರ್ಥಿ ನಿಲಯಗಳು ಬಾಡಿಗೆ ರಹಿತ/ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ. ಈ ಪೈಕಿ ಈ ಕೆಳಕಂಡ 03 ವಿದ್ಯಾರ್ಥಿ ನಿಲಯಗಳಿಗೆ ಈಗಾಗಲೇ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಮಂಜೂರಾತಿ ನೀಡಲಾಗಿರುತ್ತದೆ.<br>1) ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ, ಮೂಡಿಗೆರೆ ಟೌನ್ - ರೂ.297.00 ಲಕ್ಷ<br>2) ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ~~ಬಾಲಕರ~~ ವಿದ್ಯಾರ್ಥಿ ನಿಲಯ, ಎನ್.ಆರ್.ಪುರ - ರೂ.635.00 ಲಕ್ಷ. |